Akashvani : Bangalore
National Bulletin In Kannada
27.04.2025 / 7.35 am
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

<><*<><>*><>

ಮುಖ್ಯಾಂಶಗಳು

೧. ಮನ್ ಕಿ ಬಾತ್‌ನ ೧೨೧ನೇ ಆವೃತ್ತಿಯಲ್ಲಿಂದು ಪ್ರಧಾನಿ ನರೇಂದ್ರ ಮೋದಿ ಮನದಾಳದ ಮಾತು

೨. ಪಹಲ್ಗಾಮ್ ಭಯೋತ್ಪಾದಕ ದಾಳಿಯ ತನಿಖೆಯನ್ನು ರಾಷ್ಟ್ರೀಯ ತನಿಖಾ ಸಂಸ್ಥೆ - ಎನ್‌ಐಎ ಗೆ ಹಸ್ತಾಂತರಿಸಿದ ಕೇಂದ್ರ ಗೃಹ ಸಚಿವಾಲಯ

೩. ಅಹಿಂಸೆಯೇ ಭಾರತದ ಧರ್ಮವಾಗಿದ್ದರೂ, ದೇಶ ವಿರೋಧಿಗಳಿಗೆ ತಕ್ಕ ಪಾಠ ಕಲಿಸುವುದು ಅಗತ್ಯ- ಆರ್‌ಎಸ್‌ಎಸ್ ಮುಖ್ಯಸ್ಥ ಮೋಹನ್ ಭಾಗ್ವತ್

೪. ನೀಟ್-ಯುಜಿ ಪರೀಕ್ಷೆಯ ಅನುಮಾನಸ್ಪದ ವಿಷಯಗಳ ವರದಿಗಾಗಿ ಎನ್‌ಟಿಎ ನಿಂದ ವೇದಿಕೆ ಆರಂಭ

೫. ಐಪಿಎಲ್ ಟಿ-೨೦ ಕ್ರಿಕೆಟ್; ಕೋಲ್ಕತ್ತಾ ನೈಟ್ ರೈಡರ್ಸ್ - ಪಂಜಾಬ್ ಕಿಂಗ್ಸ್ ನಡುವಿನ ಪಂದ್ಯಕ್ಕೆ ಮಳೆ ಅಡ್ಡಿ; ಉಭಯ ತಂಡಗಳಿಗೆ ತಲಾ ಒಂದು ಅಂಕ

<><*<><>*><>

ಆಕಾಶವಾಣಿಯ ಜನಪ್ರಿಯ ಮಾಸಿಕ ಮನ್ ಕಿ ಬಾತ್ ಕಾರ್ಯಕ್ರಮದಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ, ಇಂದು ಬೆಳಗ್ಗೆ ೧೧ ಗಂಟೆಗೆ ದೇಶ-ವಿದೇಶಗಳಲ್ಲಿರುವ ಭಾರತೀಯರೊಂದಿಗೆ ತಮ್ಮ ಮನದಾಳದ ಮಾತುಗಳನ್ನು ಹಂಚಿಕೊಳ್ಳಲಿದ್ದಾರೆ. ಇದು 'ಮನ್ ಕಿ ಬಾತ್' ಕಾರ್ಯಕ್ರಮದ ೧೨೧ನೇ ಆವೃತ್ತಿಯಾಗಿದೆ. ಈ ಕಾರ್ಯಕ್ರಮ ಆಕಾಶವಾಣಿ ಮತ್ತು ದೂರದರ್ಶನದ ಎಲ್ಲ ವಾಹಿನಿಗಳು, ಎಐಆರ್ ನ್ಯೂಸ್ ಜಾಲತಾಣ, ನ್ಯೂಸ್ ಆನ್ ಏರ್ ಮೊಬೈಲ್ ಆಪ್‌ನಲ್ಲಿ ಪ್ರಸಾರವಾಗಲಿದೆ. ಹಿಂದಿ ಅವತರಣಿಕೆಯ ನಂತರ ಪ್ರಾದೇಶಿಕ ಭಾಷೆಗಳಲ್ಲಿ ಕಾರ್ಯಕ್ರಮ ಮೂಡಿಬರಲಿದೆ.

<><*<><>*><>

ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್‌ನ ಭಯೋತ್ಪಾದಕ ದಾಳಿಯ ತನಿಖೆಯನ್ನು ಗೃಹ ಸಚಿವಾಲಯ ರಾಷ್ಟ್ರೀಯ ತನಿಖಾ ಸಂಸ್ಥೆ - ಎನ್‌ಐಎ ಗೆ ಹಸ್ತಾಂತರಿಸಿದೆ.  ಈಗ ಸಂಸ್ಥೆಯು ಸಂಪೂರ್ಣ ಭಯೋತ್ಪಾದಕ ದಾಳಿ ಘಟನೆಯ ತನಿಖೆ ನಡೆಸಲಿದೆ ಎಂದು ಮೂಲಗಳು ತಿಳಿಸಿವೆ. ಇದಕ್ಕೂ ಮೊದಲು, ಎನ್‌ಐಎ ತಂಡ ಭಯೋತ್ಪಾದಕ ದಾಳಿ ಸ್ಥಳಕ್ಕೆ ಭೇಟಿ ನೀಡಿತ್ತು. ಈ ತಿಂಗಳ ೨೨ ರಂದು ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್‌ನ ಬೈಸರನ್ ಅರಣ್ಯ ಪ್ರದೇಶದಲ್ಲಿ ಈ ದಾಳಿ ನಡೆದಿದ್ದು, ಇದರಲ್ಲಿ ೨೬ ಜನರು ಸಾವನ್ನಪ್ಪಿದರು ಮತ್ತು ಅನೇಕರು ಗಾಯಗೊಂಡಿದ್ದರು.

<><*<><>*><>

ಪಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದಕ ದಾಳಿಯ ನಂತರ ಭಾರತದೊಂದಿಗೆ ಒಗ್ಗಟ್ಟನ್ನು ವ್ಯಕ್ತಪಡಿಸಲು ನಿಟ್ಟಿನಲ್ಲಿ ವಿಶ್ವದ ಹಲವು ನಾಯಕರು ಪ್ರಧಾನಿ ನರೇಂದ್ರ ಮೋದಿಯವರನ್ನು ಸಂಪರ್ಕಿಸುತ್ತಿದ್ದಾರೆ.  ಇರಾನ್ ಅಧ್ಯಕ್ಷ ಮಸೌದ್ ಪೆಜೆಶ್ಕಿಯಾನ್ ಅವರು, ಪ್ರಧಾನಿ ಮೋದಿಯವರಿಗೆ ದೂರವಾಣಿ ಕರೆ ಮಾಡಿ, ಜಮ್ಮು ಮತ್ತು ಕಾಶ್ಮೀರದಲ್ಲಿ ನಡೆದ ಭಯೋತ್ಪಾದಕ ದಾಳಿಯನ್ನು ತೀವ್ರವಾಗಿ ಖಂಡಿಸಿದ್ದು, ಮೃತಪಟ್ಟವರಿಗೆ ಸಂತಾಪ ಸೂಚಿಸಿದ್ದಾರೆ. ಇಂತಹ ಭಯೋತ್ಪಾದಕ ಕೃತ್ಯಗಳಿಗೆ ಯಾವುದೇ ಸಮರ್ಥನೆ ಇಲ್ಲ. ಮಾನವೀಯತೆಯಲ್ಲಿ ನಂಬಿಕೆಯಿರುವ ಎಲ್ಲರೂ ಭಯೋತ್ಪಾದನೆಯ ವಿರುದ್ಧದ ಹೋರಾಟದಲ್ಲಿ ಒಟ್ಟಾಗಿ ನಿಲ್ಲಬೇಕು ಎಂದು ಉಭಯ ನಾಯಕರು ಪ್ರತಿಪಾದಿಸಿದ್ದಾರೆ. ಭಾರತ, ಭಯೋತ್ಪಾದಕ ದಾಳಿಯ ಹಿಂದಿರುವ ಬೆಂಬಲಿಗರನ್ನು ಎದುರಿಸುವ ಸಂಕಲ್ಪವನ್ನು ಹೊಂದಿದೆ ಎಂದು ಜನತೆ ಭಾವನೆಯನ್ನು ಪ್ರಧಾನಿ ನರೇಂದ್ರ ಮೋದಿ ಹಂಚಿಕೊಂಡರು. ನಿನ್ನೆ ಬಂದರ್ ಅಬ್ಬಾಸ್‌ನಲ್ಲಿ ನಡೆದ ಸ್ಫೋಟದಲ್ಲಿ ಮೃತಪಟ್ಟವರಿಗೆ ಸಂತಾಪ ಸೂಚಿಸಿದ್ದು, ಗಾಯಗೊಂಡವರ ಶೀಘ್ರ ಚೇತರಿಕೆಗೆ ಹಾರೈಸಿದರು. ಯುಎಇ ಅಧ್ಯಕ್ಷ ಮೊಹಮ್ಮದ್ ಬಿನ್ ಜಾಯೆದ್ ಅಲ್ ನಹ್ಯಾನ್, ಪ್ರಧಾನಿ ಅವರಿಗೆ ಕರೆ ಮಾಡಿ ಭಯೋತ್ಪಾದಕ ದಾಳಿಯಲ್ಲಿ ಪ್ರಾಣ ಕಳೆದುಕೊಂಡವರಿಗೆ ಸಂತಾಪ ಸೂಚಿಸಿದ್ದಾರೆ. ಭಯೋತ್ಪಾದಕ ದಾಳಿಯನ್ನು ಬಲವಾಗಿ ಖಂಡಿಸಿರುವ ಅವರು, ಭಾರತದೊಂದಿಗೆ ಸಂಪೂರ್ಣ ಒಗ್ಗಟ್ಟು ಮತ್ತು ಬೆಂಬಲವನ್ನು ವ್ಯಕ್ತಪಡಿಸಿದ್ದಾರೆ.

<><*<><>*><>

ರಾಷ್ಟ್ರೀಯ ಭದ್ರತೆಯ ಹಿತದೃಷ್ಟಿಯಿಂದ ಭಯೋತ್ಪಾದನಾ ವಿರೋಧಿ ಕಾರ್ಯಾಚರಣೆಗಳು ಮತ್ತು ಭದ್ರತಾ ಪಡೆಗಳ ಚಲನವಲನಗಳ ನೇರ ಪ್ರಸಾರ ಮಾಡದಂತೆ ಕೇಂದ್ರ ವಾರ್ತಾ ಮತ್ತು ಪ್ರಸಾರ ಸಚಿವಾಲಯವು ಎಲ್ಲಾ ಮಾಧ್ಯಮ ವಾಹಿನಿಗಳಿಗೆ ಸಲಹೆ ನೀಡಿದೆ. ರಾಷ್ಟ್ರೀಯ ಭದ್ರತೆಯನ್ನು ಕಾಪಾಡುವಲ್ಲಿ ಮಾಧ್ಯಮಗಳು, ಡಿಜಿಟಲ್ ವೇದಿಕೆಗಳು ಮತ್ತು ವ್ಯಕ್ತಿಗಳು ಪ್ರಮುಖ ಪಾತ್ರ

ವಹಿಸುತ್ತಾರೆ. ರಕ್ಷಣಾ ಕಾರ್ಯಾಚರಣೆಗಳು ಅಥವಾ ಚಲನವಲನಗಳಿಗೆ ಸಂಬಂಧಿಸಿದ ಮೂಲ ಆಧಾರಿತ ಮಾಹಿತಿಯನ್ನು ಆಧರಿಸಿ ವರದಿ ಮಾಡುವುದನ್ನು ನಿಲ್ಲಿಸುವಂತೆ ಸಚಿವಾಲಯ ನಿರ್ದೇಶಿಸಿದೆ.

<><*<><>*><>

ಅಹಿಂಸೆ ಭಾರತದ ಧರ್ಮವಾಗಿದ್ದರೂ, ದೇಶ ವಿರೋಧಿಗಳಿಗೆ ತಕ್ಕ ಪಾಠ ಕಲಿಸುವುದೂ ನಮ್ಮ ಧರ್ಮ ಎಂದು ಆರ್‌ಎಸ್‌ಎಸ್ ಸರಸಂಘಚಾಲಕ ಮೋಹನ್ ಭಾಗ್ವತ್ ತಿಳಿಸಿದ್ದಾರೆ. ನವದೆಹಲಿಯಲ್ಲಿ ನಿನ್ನೆ ನಡೆದ 'ದಿ ಹಿಂದೂ ಮ್ಯಾನಿಫೆಸ್ಟೋ' ಪುಸ್ತಕ ಬಿಡುಗಡೆ ಸಮಾರಂಭದಲ್ಲಿ ಮಾತನಾಡಿದ ಅವರು, ಅಹಿಂಸೆ ಭಾರತದ ಮೌಲ್ಯಗಳ ಪ್ರಮುಖ ಭಾಗವಾಗಿದೆ, ದಬ್ಬಾಳಿಕೆ ಮಾಡುವವರು, ದೇಶ ವಿರೋಧಿಗಳು ಮತ್ತು ಸಮಾಜದಲ್ಲಿ ಅಶಾಂತಿ ಸೃಷ್ಟಿಸುವವರಿಗೆ ಪಾಠ ಕಲಿಸುವುದೂ ಭಾರತದ ಧರ್ಮವಾಗಿದೆ. ಭಾರತ ಎಂದಿಗೂ ಇತರರಿಗೆ ಹಾನಿ ಬಯಸುವುದಿಲ್ಲ ಮತ್ತು ಅಗೌರವ ತೋರುವುದಿಲ್ಲ ಎಂದರು.

<><*<><>*><>

ನೀಟ್ -ಯುಜಿ ೨೦೨೫ ಪರೀಕ್ಷೆಯ ಬಗ್ಗೆ ಅನುಮಾನಾಸ್ಪದ ವಿಷಯಗಳನ್ನು ವರದಿ ಮಾಡಲು ರಾಷ್ಟ್ರೀಯ ಪರೀಕ್ಷಾ ಸಂಸ್ಥೆ - ಎನ್‌ಟಿಎ ಮೀಸಲಾದ ವೇದಿಕೆಯನ್ನು ಪ್ರಾರಂಭಿಸಿದೆ. ದುಷ್ಕೃತ್ಯ ಅಥವಾ ಅಕ್ರಮದಲ್ಲಿ ತೊಡಗಿರುವ ಮತ್ತು ಸುಳ್ಳು ಭರವಸೆಗಳೊಂದಿಗೆ ಅಭ್ಯರ್ಥಿಗಳನ್ನು ವಂಚಿಸಲು ಪ್ರಯತ್ನಿಸುವವರಿಂದಾಗಿ ದಾರಿ ತಪ್ಪದಂತೆ ಅಭ್ಯರ್ಥಿಗಳಿಗೆ ಎನ್‌ಟಿಎ ಸಲಹೆ ನೀಡಿದೆ. ಮುಂದಿನ ತಿಂಗಳ ೪ ರಂದು ಸಂಜೆ ೫ ಗಂಟೆಯೊಳಗೆ ಎನ್‌ಟಿಎ ಯ ಅಧಿಕೃತ ಜಾಲತಾಣದಲ್ಲಿ ಅಂತಹ ದಾರಿತಪ್ಪಿಸುವ ಮಾಹಿತಿ ಮತ್ತು ಅದನ್ನು ಹರಡುವ ವ್ಯಕ್ತಿಗಳನ್ನು ವರದಿ ಮಾಡುವಂತೆ ಅಭ್ಯರ್ಥಿಗಳನ್ನು ವಿನಂತಿಸಿದೆ.

<><*<><>*><>

ದಕ್ಷಿಣ ಇರಾನಿನ ಬಂದರ್ ಅಬ್ಬಾಸ್‌ನಲ್ಲಿರುವ ಶಾಹಿದ್ ರಾಜೀ ಬಂದರಿನಲ್ಲಿ ನಿನ್ನೆ ಸಂಭವಿಸಿದ ದೊಡ್ಡ ಸ್ಫೋಟದಲ್ಲಿ ಮೃತಪಟ್ಟವರ ಸಂಖ್ಯೆ ೧೪ಕ್ಕೆ ಏರಿಕೆಯಾಗಿದ್ದು, ಸುಮಾರು ೭೫೦ಕ್ಕೂ ಹೆಚ್ಚು ಮಂದಿ ಗಾಯಗೊಂಡಿದ್ದಾರೆ. ಶಾಹಿದ್ ರಾಜೀ ಬಂದರಿನ ವಾರ್ಫ್ ಪ್ರದೇಶದಲ್ಲಿ ಸಂಗ್ರಹಿಸಲಾಗಿದ್ದ ಹಲವಾರು ಕಂಟೇನರ್‌ಗಳ ಸ್ಫೋಟವೇ ಘಟನೆಯ ಮೂಲ ಎಂದು ಸ್ಥಳೀಯ ಮಾಧ್ಯಮಗಳು ವರದಿ ಮಾಡಿದೆ. ಸ್ಫೋಟದಿಂದ ತೈಲ ಸೌಲಭ್ಯಗಳ ಮೇಲೆ ಯಾವುದೇ ಪರಿಣಾಮ ಬೀರಿಲ್ಲ ಎಂದು ಇರಾನಿನ ರಾಷ್ಟ್ರೀಯ ಪೆಟ್ರೋಲಿಯಂ ಸಂಸ್ಕರಣಾ ಮತ್ತು ವಿತರಣಾ ಕಂಪನಿ ತಿಳಿಸಿದೆ. ಇರಾನ್ ಒಮಾನ್‌ನಲ್ಲಿ ಅಮೆರಿಕದೊಂದಿಗೆ ಮೂರನೇ ಸುತ್ತಿನ ಪರಮಾಣು ಮಾತುಕತೆಯನ್ನು

ಪ್ರಾರಂಭಿಸುತ್ತಿದ್ದಂತೆ ಈ ಸ್ಫೋಟ ಸಂಭವಿಸಿದೆ. ಸ್ಫೋಟದ ಕಾರಣ ತಕ್ಷಣಕ್ಕೆ ಸ್ಪಷ್ಟವಾಗಿಲ್ಲ. ಇರಾನ್ ಅಧ್ಯಕ್ಷ ಮಸೌದ್ ಪೆಝೆಶ್‌ಕಿಯಾನ್, ಮೃತಪಟ್ಟವರಿಗೆ ಸಂತಾಪ ಸೂಚಿಸಿದ್ದು, ಪ್ರಕರಣದ ಸಮಗ್ರ ತನಿಖೆಗೆ ಆದೇಶಿಸಿದ್ದಾರೆ.

<><*<><>*><>

ಈ ಬಾರಿಯ ಕೈಲಾಸ ಮಾನಸ ಸರೋವರ ಯಾತ್ರೆ ಜೂನ್ ನಿಂದ ಆಗಸ್ಟ್ ವರೆಗೆ ನಡೆಯಲಿದೆ. ವಿದೇಶಾಂಗ ವ್ಯವಹಾರಗಳ ಸಚಿವಾಲಯ ಯಾತ್ರೆ ಆಯೋಜಿಸಿದ್ದು, ಉತ್ತರಾಖಂಡ್ ರಾಜ್ಯದ ಲಿಪುಲೇಕ್ ಪಾಸ್ ಹಾಗೂ ಸಿಕ್ಕಿಂರಾಜ್ಯದ ನಾಥುಲಾ ಪಾಸ್ ಮೂಲಕ ನಡೆಯಲಿದೆ. ಅರ್ಜಿಗಳನ್ನು ಸ್ವೀಕರಿಸಲು kmy.gov.in ವೆಬ್ ಸೈಟ್ ತೆರೆಯಲಾಗಿದ್ದು, ನ್ಯಾಯಯುತ ಮಾದರಿಯಲ್ಲಿ ಆಯ್ಕೆ ಪ್ರಕ್ರಿಯೆ ನಡೆಯಲಿದೆ ಎಂದು ಸಚಿವಾಲಯ ತಿಳಿಸಿದೆ. ವೆಬ್ ಸೈಟ್ ಮೂಲಕ ನೋಂದಣಿ ಮಾಡಿಕೊಳ್ಳುವ ಜತೆಗೆ ಸಲಹೆಗಳನ್ನು ಸಹ ನೀಡಬಹುದಾಗಿದೆ.

<><*<><>*><>

ಮುಂಬೈನಲ್ಲಿ ಮೇ ೧ ರಿಂದ ೪ ರವರೆಗೆ ನಡೆಯಲಿರುವ ವಿಶ್ವ, ಶ್ರವಣ, ದೃಶ್ಯ ಮತ್ತು ಮನರಂಜನಾ ಶೃಂಗಸಭೆ- ವೇವ್ಸ್ ೨೦೨೫ ರಲ್ಲಿ ಭಾರತ್ ಮಳಿಗೆ ಅನಾವರಣಗೊಳ್ಳಲಿದೆ. ಭಾರತದ ಕಥೆ ಹೇಳುವ ಪರಂಪರೆ ಹಾಗೂ ಜಾಗತಿಕ ಮಾಧ್ಯಮ ಮತ್ತು ಮನರಂಜನಾ ಕ್ಷೇತ್ರದಲ್ಲಿ ದೇಶದ ಬೆಳೆಯುತ್ತಿರುವ ಪ್ರಭಾವಕ್ಕೆ ಗೌರವಾರ್ಥವಾಗಿ ಭಾರತ ಮಳಿಗೆ ಅನಾವರಣಗೊಳ್ಳಲಿದೆ. 'ಕಲೆಯಿಂದ ಕೋಡ್‌ವರೆಗೆ' ಎಂಬ ಧ್ಯೇಯವಾಕ್ಯದಡಿ ಈ ಮಳಿಗೆಯು ಭಾರತದ ವಸುಧೈವ ಕುಟುಂಬಕಂ ಎಂಬ ಮನೋಭಾವವನ್ನು ಹಾಗೂ ದೇಶದ ಕಲಾತ್ಮಕ ಸಂಪ್ರದಾಯಗಳು ದೀರ್ಘಕಾಲದವರೆಗೆ ಸೃಜನಶೀಲತೆ, ಸಾಮರಸ್ಯ ಮತ್ತು ಸಾಂಸ್ಕೃತಿಕ ರಾಜತಾಂತ್ರಿಕತೆಯ ದಾರಿದೀಪವಾಗಿದೆ ಎಂಬುದನ್ನು ಪ್ರದರ್ಶಿಸುತ್ತದೆ.

<><*<><>*><>

ವಾಯುಪ್ರದೇಶ ನಿರ್ಬಂಧಗಳ ನಡುವೆ ಪ್ರಯಾಣಿಕರ ಸೌಕರ್ಯ, ಸುರಕ್ಷತೆ ಮತ್ತು ಪ್ರಯಾಣಿಕರ ನಿರ್ವಹಣಾ ಕ್ರಮಗಳನ್ನು ಜಾರಿಗೆ ತರಲು ಕೇಂದ್ರ ಸರ್ಕಾರ ವಿಮಾನಯಾನ ಸಂಸ್ಥೆಗಳಿಗೆ ನಿರ್ದೇಶನ ನೀಡಿದೆ. ಮಾರ್ಗ ಬದಲಾವಣೆಗಳು, ಪ್ರಯಾಣದ ಸಮಯ ಮತ್ತು ಪ್ರಯಾಣದ ಸಮಯದಲ್ಲಿ ಯಾವುದೇ ತಾಂತ್ರಿಕ ನಿಲುಗಡೆಗಳ ಬಗ್ಗೆ ಪ್ರಯಾಣಿಕರಿಗೆ ಮುಂಚಿತವಾಗಿ ತಿಳಿಸುವಂತೆ ಸಚಿವಾಲಯ ವಿಮಾನಯಾನ ಸಂಸ್ಥೆಗಳಿಗೆ ಸೂಚಿಸಿದೆ. ವಿಮಾನದಾದ್ಯಂತ ಆಹಾರ, ನೀರು ಮತ್ತು ವಿಶೇಷ ಊಟದ ಲಭ್ಯತೆಯನ್ನು ಖಚಿತಪಡಿಸಿಕೊಳ್ಳಲು ಹಾಗೂ

ವಿಮಾನದಲ್ಲಿ ವೈದ್ಯಕೀಯ ಸರಬರಾಜುಗಳು ಮತ್ತು ತುರ್ತು ಸೇವೆಗಳ ಲಭ್ಯತೆಯನ್ನು ಪರಿಶೀಲಿಸುವಂತೆ ಸಚಿವಾಲಯವು ವಿಮಾನಯಾನ ಸಂಸ್ಥೆಗಳಿಗೆ ನಿರ್ದೇಶಿಸಿದೆ.

<><*<><>*><>

ಕೋಲ್ಕತ್ತಾದ ಈಡನ್ ಗಾರ್ಡನ್ಸ್‌ನಲ್ಲಿ ನಿನ್ನೆ ರಾತ್ರಿ ನಡೆದ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯ ನಿರಂತರ ಮಳೆಯ ಕಾರಣ ರದ್ದಾದ ನಂತರ ಕೋಲ್ಕತ್ತಾ ನೈಟ್ ರೈಡರ್ಸ್ ಮತ್ತು ಪಂಜಾಬ್ ಕಿಂಗ್ಸ್ ತಂಡಗಳು ತಲಾ ೧ ಅಂಕವನ್ನು ಪಡೆದಿವೆ. ಟಾಸ್ ಗೆದ್ದು, ಮೊದಲು ಬ್ಯಾಟಿಂಗ್ ಆಯ್ಕೆ ಮಾಡಿಕೊಂಡ ಪಂಜಾಬ್ ಕಿಂಗ್ಸ್ ನಿಗದಿತ ೨೦ ಓವರ್‌ಗಳಲ್ಲಿ ನಾಲ್ಕು ವಿಕೆಟ್‌ಗಳಿಗೆ ೨೦೧ ರನ್ ಗಳಿಸಿತು. ೨೦೨ ರನ್‌ಗಳ ಗುರಿಯನ್ನು ಬೆನ್ನತ್ತಿದ ಕೋಲ್ಕತ್ತಾ ನೈಟ್ ರೈಡರ್ಸ್ ಮಳೆ ಕಾರಣ ಆಟ ಸ್ಥಗಿತಗೊಂಡಾಗ ಒಂದು ಓವರ್‌ನಲ್ಲಿ ಯಾವುದೇ ವಿಕೆಟ್ ನಷ್ಟವಿಲ್ಲದೆ ೭ ರನ್ ಗಳಿಸಿತ್ತು. ಇಂದು ಎರಡು ಪಂದ್ಯಗಳು ನಡೆಯಲಿದ್ದು, ಮುಂಬೈನಲ್ಲಿ ನಡೆಯಲಿರುವ ದಿನದ ಮೊದಲ ಪಂದ್ಯದಲ್ಲಿ ಮುಂಬೈ ಇಂಡಿಯನ್ಸ್ ಹಾಗೂ ಲಕ್ನೋ ಸೂಪರ್ ಜೈಂಟ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ಮಧ್ಯಾಹ್ನ ೩:೩೦ ಕ್ಕೆ ಆರಂಭವಾಗಲಿದೆ. ದೆಹಲಿಯಲ್ಲಿ ನಡೆಯಲಿರುವ ದಿನದ ಎರಡನೇ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ, ಡೆಲ್ಲಿ ಕ್ಯಾಪಿಟಲ್ಸ್ ತಂಡವನ್ನು ಎದುರಿಸಲಿದೆ. ಪಂದ್ಯ ರಾತ್ರಿ ೭:೩೦ ಕ್ಕೆ ಆರಂಭವಾಗಲಿದೆ.

<><*<><>*><>

ಸ್ಪೇನ್‌ನ ಸೆವಿಲ್ಲೆಯಲ್ಲಿರುವ ಎಸ್ಟಾಡಿಯೊ ಡಿ ಲಾ ಕಾರ್ಟುಜಾದಲ್ಲಿ ನಿನ್ನೆ ನಡೆದ ಕೋಪಾ ಡೆಲ್ ರೇ ಫುಟ್ಬಾಲ್‌ನ ಫೈನಲ್‌ನಲ್ಲಿ ಬಾರ್ಸಿಲೋನಾ ತಂಡವು, ರಿಯಲ್ ಮ್ಯಾಡ್ರಿಡ್ ಅನ್ನು ೩-೨ ಗೋಲುಗಳಿಂದ ಪರಾಭವಗೊಳಿಸಿದೆ. ಈ ಗೆಲುವು ಮೂಲಕ ಬಾರ್ಸಿಲೋನಾ ದಾಖಲೆಯ ೩೨ ನೇ ಸ್ಪ್ಯಾನಿಷ್ ಕಪ್ ಪ್ರಶಸ್ತಿ ಪಡೆದುಕೊಂಡಿದೆ.

<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೧೨ ಕ್ಕೆ <>*><>